ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

ಸಂ: ಪಿ&ಎಸ್/ಎನ್ಎಫ್ಹೆಚ್/ಸಿಆರ್-1/2018-19

ಕಾರ್ಮಿಕ ಆಯುಕ್ತರ ಕಚೇರಿ
'ಕಾರ್ಮಿಕ ಭವನ' ಬನ್ನೇರುಘಟ್ಟ ರಸ್ತೆ
ಬೆಂಗಳೂರು-29, ದಿನಾಂಕ: 08.06.2018

## ಸುತ್ತೋಲೆ

ವಿಷಯ : ದಿನಾಂಕ 14.06.2018 ರಂದು ಗ್ರಾಮ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ದಿನದಂದು ರಾಜ್ಯಾದಾದ್ಯಂತ ಅರ್ಹ ಮತದಾರ ಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ಘೋಷಿಸುವ ಬಗ್ಗೆ.

ಉಲ್ಲೇಖ : ರಾಜ್ಯ ಚುನಾವಣಾ ಆಯೋಗ ಪತ್ರ ಸಂಖ್ಯೆ : ರಾಚುಆ/236/ಟಿಜೆಡ್‌ಪಿ/2017
ದಿನಾಂಕ : 07.06.2018

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನೆಡಸಲು ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. (ಪ್ರತಿ ಲಗತ್ತಿಸಿದೆ).

ದಿನಾಂಕ: 14.06.2018 ರಂದು ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿಸಿಕೊಂಡಿರುವ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪ್ರಕಾರ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ. ಆದ್ದರಿಂದ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ: 14.06.2018 (ಗುರುವಾರ) ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಕಾನೂನಿನನ್ವಯ ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಲಾಗಿದೆ.

12/06/18



Scanned by CamScanner

ಈ ವಿಷಯದಲ್ಲಿ ಅರ್ಹ ಯಾವುದೇ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ರಜೆ ನೀಡದೆ ಹಾಗೂ ಮತದಾನಕ್ಕೆ ಅವಕಾಶ ಮಾಡಿಕೊಡದಿದ್ದಲ್ಲಿ ಅಂತಹ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ವಿರುದ್ಧ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3–ಎ ರಡಿಯಲ್ಲಿ ಹಾಗೂ 1951ರ ಪ್ರಜಾಪ್ರಾತಿನಿಧ್ಯ ಕಾಯ್ದೆಯ ಕಲಂ 135(ಬಿ)ರಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು.

ಗ್ರಾಮ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಸಲು ರಾಜ್ಯ ಚುನಾವಣಾ ಆಯೋಗವು ಗೊತ್ತುಪಡಿಸಿರುವ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಗೆ ಬರುವ ಕಾರ್ಮಿಕರು, ಕಾರ್ಮಿಕ ಸಂಘಗಳು/ಮಾಲೀಕರ ಸಂಘಗಳ ಪ್ರತಿನಿಧಿಗಳ ಗಮನಕ್ಕೆ ತರಲು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು/ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ.

Chaitra V. 12/06/18

**ಆಯುಕ್ತರು**

**ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ**

sd/-

<u>ಗೆ:</u>

ಆಡಳಿತವರ್ಗ, ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ

1) ಎಲ್ಲಾ ಉಪ ಕಾರ್ಮಿಕ ಆಯುಕ್ತರುಗಳು
2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರುಗಳು
3) ಎಲ್ಲಾ ಕಾರ್ಮಿಕ ಅಧಿಕಾರಿಗಳು → ತಮ್ಮ ಅಧೀನದಲ್ಲಿ ಬರುವ ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು

***<u>ಪ್ರತಿಯನ್ನು ಮಾಹಿತಿಗಾಗಿ</u>*** :

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2) ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
4) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
5) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
6) ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂದವ್ಯ), ಬೆಂಗಳೂರು
7) ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು



Scanned by CamScanner